# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಸಾ&ಅ:2022-23 |3000 ದಿನಾಂಕ:03.09.2022

## : ಸುತ್ತೋಲೆ :

ವಿಷಯ : ದಿನಾಂಕ:05.09.2022 ರಂದು ಆಚರಿಸಲಿರುವ "ಶಿಕ್ಷಕರ ದಿನಾಚರಣೆ" ಯಲ್ಲಿ ಭಾಗವಹಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:03.09.2022

******

ತುಮಕೂರು ವಿಶ್ವವಿದ್ಯಾನಿಲಯದಲ್ಲಿ **ದಿನಾಂಕ:05.09.2022** ರಂದು **ಬೆಳಗ್ಗೆ 11.00 ಗಂಟೆಗೆ "ಶಿಕ್ಷಕರ ದಿನಾಚರಣೆ"** ಕಾರ್ಯಕ್ರಮವನ್ನು **ಸರ್. ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ** ಆಯೋಜಿಸಲಾಗಿದ್ದು, ಸದರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು **ಪ್ರೊ. ಎಂ. ವೆಂಕಟೇಶ್ವರಲು, ಮಾನ್ಯ ಕುಲಪತಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರು ವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು **ಪ್ರೊ. ಕೆ.ಆರ್. ವೇಣುಗೋಪಾಲ್, ವಿಶ್ರಾಂತ ಕುಲಪತಿಗಳು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು** ಇವರು ನೆರವೇರಿಸಲಿದ್ದು, ಮುಖ್ಯ ಅತಿಥಿಗಳಾಗಿ **ಪ್ರೊ. ರವೀಂದ್ರ ಪೌಲ್, ನಿವೃತ್ತ ಪ್ರಾಧ್ಯಾಪಕರು, ಪ್ರಾಣಿಶಾಸ್ತ್ರ ವಿಭಾಗ, ಗುಲಬರ್ಗಾ ವಿಶ್ವವಿದ್ಯಾನಿಲಯ, ಗುಲಬರ್ಗಾ,** ಇವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ **ಪ್ರೊ. ಶಿವಚಿತ್ತಪ್ಪ ಕೆ., ಮಾನ್ಯ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಹಾಗೂ ಪ್ರೊ. ನಿರ್ಮಲ್ ರಾಜು, ಕುಲಸಚಿವರು(ಪರೀಕ್ಷಾಂಗ)** ಇವರು ಉಪಸ್ಥಿತರಿರಲಿದ್ದಾರೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳು ಮತ್ತು ಘಟಕ ಕಾಲೇಜುಗಳ ಎಲ್ಲಾ ಖಾಯಂ ಬೋಧಕ ಸಿಬ್ಬಂದಿಗಳು ಹಾಗೂ ಅತಿಥಿ ಉಪನ್ಯಾಸಕರು ದಿನಾಂಕ:05.09.2022 ರಂದು ಬೆಳಿಗ್ಗೆ 10.45ಕ್ಕೆ ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಹಾಜರಿದ್ದು, ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ತಿಳಿಸಲಾಗಿದೆ.

ಸದರಿ ಮಾಹಿತಿಯನ್ನು ತಮ್ಮ ಅಧೀನದಲ್ಲಿನ ಎಲ್ಲಾ ಬೋಧಕರ ಗಮನಕ್ಕೆ ತರಲು ಕೋರಿದೆ.

ಆದೇಶದ ಮೇರೆಗೆ
D. Sunny 03/09/2022
ಉಪಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ

ಗೆ,

1. **ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**
2. **ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

ಪ್ರತಿಗಳು:

1. ನಿರ್ದೇಶಕರು, ದೈಹಿಕ ಶಿಕ್ಷಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: **ಕಾರ್ಯಕ್ರಮದ ವ್ಯವಸ್ಥೆಗೆ ಅಗತ್ಯ ಕ್ರಮವಹಿಸುವುದು.**
2. ಕಾರ್ಯಪಾಲಕ ಅಭಿಯಂತರರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: **(ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಎಲ್ಲಾ ಬೋಧಕರಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)**
4. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ